ಕೃಷಿ ಮಂತ್ರಿಗಳು ಒಂದು ನಿಯೋಗ ತೆಗೆದುಕೊಂಡು ಹೋಗಿ ಕೇಂದ್ರ ಸರ್ಕಾರಕ್ಕೆ ಮನವರಿಗೆ ಮಾಡಿಕೊಡಬೇಕು. ಕಳೆದ ಮೂರು ವರ್ಷಗಳಿಂದ ಈ ರಾಜ್ಯದಲ್ಲಿ ಜನರು ಬರಗಾಲದಿಂದ ಸಾಯುತ್ತಿದ್ದಾರೆ. ನಮ್ಮ ರೈತರ entire ಸಾಲ ಮನ್ನಾ ಮಾಡಿಸಬೇಕೆಂದು ಒಂದು ನಿಯೋಗ ತೆಗೆದುಕೊಂಡು ಹೋಗಿ ಸಾಲ ಮನ್ನಾ ಮಾಡಿಸಿ. ಇವತ್ತಿನವರೆಗೆ up-to-date ಆಗಿ ರೈತರ ಎಲ್ಲಾ ಸಾಲವನ್ನು ಮನ್ನಾ ಮಾಡಿಸಬೇಕು. ಮಂಡ್ಯ ಜಿಲ್ಲೆ ಇರಬಹುದು, ಕಾವೇರಿ ಅಚ್ಚುಕಟ್ಟು ಪ್ರದೇಶದ ಸುಮಾರು 2 ಲಕ್ಷ ಜನರ ಕಬ್ಬು ಇರಬಹುದು, ಇತರೆ ಬೆಳೆ ಇರಬಹುದು ಸಂಪೂರ್ಣ ನಾಶವಾಗಿದೆ. ತಮಿಳುನಾಡಿನಲ್ಲಿ ಸಂತ್ರಸ್ತ ರೈತರಿಗೆ ಪರಿಹಾರ ಕೊಡಲು ಈಗಾಗಲೇ ತಮಿಳುನಾಡಿನ ಮುಖ್ಯಮಂತ್ರಿಗಳು ಘೋಷಣೆ ಮಾಡಿದ್ದಾರೆ. ಅದೇ ರೀತಿ ನೀವು ನಾಳೆ ಉತ್ತರ ಕೊಡುವ ಸಂದರ್ಭದಲ್ಲಿ ಕಾವೇರಿ ಬೇಸಿನ್‌ನಲ್ಲಿರುವ ಯಾವ ರೈತರ ಬೆಳೆ ಸಂಪೂರ್ಣ ನಾಶವಾಗಿದೆ, ಉದಾಹರಣೆಗೆ ಹೇಳುವುದಾದರೆ, ನಮ್ಮಲ್ಲಿ ಹೇಮಾವತಿ ನದಿ HRBC ನಾಲೆ, ಸಂಪೂರ್ಣ ಬೆಳೆ ನಷ್ಟವಾಗಿದ್ದು, ಅರಕಲಗೂಡು ತಾಲ್ಲೂಕು, ಹಳ್ಳಿ ಮೈಸೂರು ಮತ್ತು ಕೆ.ಆರ್. ನಗರ ತಾಲ್ಲೂಕಿನ ರೈತರು ಸಾಯುತ್ತಿದ್ದಾರೆ. ಅದಕ್ಕಾಗಿ ದಯಮಾಡಿ ನಾಡಿದ್ದು ಮುಖ್ಯಮಂತ್ರಿಗಳು ಉತ್ತರ ಕೊಡುವಾಗ ಕಾವೇರಿ ಬೇಸಿನ್‌ನಲ್ಲಿರುವ ಅಚ್ಚುಕಟ್ಟು ಪ್ರದೇಶದಲ್ಲಿರುವ ರೈತರ ಬೆಳೆ ಹಾಳಾಗಿದೆ. ಅಷ್ಟೂ ಜನರಿಗೆ ಪರಿಹಾರ ಕೊಡಲು ಘೋಷಣೆ ಮಾಡಬೇಕೆಂದು ಮುಖ್ಯಮಂತ್ರಿಗಳನ್ನು ಒತ್ತಾಯ ಮಾಡುತ್ತೇನೆ. ಬರಗಾಲವೆಂದು ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕೆಂದು ಹೇಳಿ ಮಾನ್ಯ ಸಭಾಧ್ಯಕ್ಷರಿಗೆ ಇಷ್ಟು ಹೊತ್ತು ಮಾತನಾಡಲು ನನಗೆ ಅವಕಾಶ ಕೊಟ್ಟಿದ್ದಕ್ಕಾಗಿ ವಂದನೆ ಸಲ್ಲಿಸಿ, ಅದರ ಜೊತೆಗೆ ಕೊಡಗಿಗೆ 100 ಕೋಟಿ ರೂ.ಗಳನ್ನು ರಸ್ತೆಗಳಿಗೆ ಕೊಡಲಿ ಎಂದು ಹೇಳಿ ನಾನು ಒತ್ತಾಯ ಮಾಡುತ್ತೇನೆ.

ಅಧ್ಯಕ್ಷರು : ಆಯಿತು. ಈಗ ಚರ್ಚೆಯನ್ನು ನಾಳೆಗೆ ಮುಂದುವರೆಸಲಾಗಿದೆ ಈಗ ಶಾಸನ ರಚನೆ ಮತ್ತು ವಿಧೇಯಕಗಳನ್ನು ಮಂಡಿಸುವುದು.

5. ಶಾಸನ ರಚನೆ

ಅ. ವಿಧೇಯಕಗಳನ್ನು ಮಂಡಿಸುವುದು

1. ಮೈಸೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ವಿಧೇಯಕ, 2013

ಶ್ರೀ. ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, 2013 ನೇ ಸಾಲಿನ 'ಮೈಸೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : "2013 ನೇ ಸಾಲಿನ ಮೈಸೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕದ ಮಂಡನೆಗೆ ಅನುಮತಿ ನೀಡಲಾಯಿತು.

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, 2013 ನೇ ಸಾಲಿನ 'ಮೈಸೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–2)

2. ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ, 2013

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು) : ಮಾನ್ಯ ಅಧ್ಯಕ್ಷರೆ, '2013 ನೇ ಸಾಲಿನ ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ' ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.